# ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-01.

ಸಂಖ್ಯೆ: ಪಿಎಸ್‌ಸಿ 02 ಆರ್‌ಟಿ(4)ಬಿ/2019-20/3713 ದಿನಾಂಕ: 16-03-2020

## ಪತ್ರಿಕಾ ಪ್ರಕಟಣೆ

ಆಯೋಗದ ಅಧಿಸೂಚನೆ ದಿನಾಂಕ: 05.10.2016 ಮತ್ತು ಸೇರ್ಪಡೆ ಅಧಿಸೂಚನೆ ದಿನಾಂಕ: 22.10.2016ರಲ್ಲಿ ಅಧಿಸೂಚಿಸಲಾಗಿರುವ ವಿವಿಧ ಪದನಾಮಗಳ ಗ್ರೂಪ್-ಸಿ ತಾಂತ್ರಿಕೇತರ ಹುದ್ದೆಗಳ ಹೆಚ್ಚುವರಿ ಆಯ್ಕೆಪಟ್ಟಿಗಳನ್ನು ಸಿದ್ಧಪಡಿಸುವ ಸಂಬಂಧ ಮೂಲ ದಾಖಲೆಗಳ ಪರಿಶೀಲನೆಯನ್ನು ದಿನಾಂಕ: 16.03.2020, 17.03.2020 ಮತ್ತು 23.03.2020 ರಂದು ನಡೆಸಲು ನಿಗದಿಪಡಿಸಲಾಗಿತ್ತು ಹಾಗೂ ಆಯೋಗದ ಅಧಿಸೂಚನೆ ದಿ: 03.11.2016 ರಲ್ಲಿ ಅಧಿಸೂಚಿಸಲಾಗಿರುವ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯ ವಸತಿ ಶಾಲೆಗಳಲ್ಲಿನ ಚಿತ್ರಕಲಾ ಶಿಕ್ಷಕರು (ಡಿಪ್ಲೊಮಾ) ಹುದ್ದೆಗಳ ನೇಮಕಾತಿಗಾಗಿ ದಿ: 23.03.2020 ರಂದು ಮೂಲ ದಾಖಲೆಗಳ ಪರಿಶೀಲನೆಯನ್ನು ನಿಗದಿಪಡಿಸಲಾಗಿತ್ತು. ಈ ಸಂಬಂಧ ಈಗಾಗಲೇ ಅರ್ಹ ಅಭ್ಯರ್ಥಿಗಳಿಗೆ ಸೂಚನಾ ಪತ್ರಗಳನ್ನೂ ಕಳುಹಿಸಲಾಗಿತ್ತು. ಈ ಮಧ್ಯೆ ರಾಜ್ಯದಲ್ಲಿ ಕೋವಿಡ್-19 (ಕೊರೊನಾ) ಸೋಂಕು ವ್ಯಾಪಕವಾಗಿ ಹರಡುವ ಭೀತಿ ಎದುರಾದ ಹಿನ್ನಲೆಯಲ್ಲಿ ರಾಜ್ಯ ಸರ್ಕಾರವು ಶನಿವಾರದಿಂದ ಒಂದು ವಾರ ರಾಜ್ಯಾದ್ಯಂತ ಬಹು ಸಂಖ್ಯೆಯಲ್ಲಿ ಜನರು ಸೇರುವ ಸಭೆ, ಸಮಾರಂಭ, ಸಮಾವೇಶ, ಶಾಲಾ/ಕಾಲೇಜು, ಕೋಚಿಂಗ್ ಕ್ಲಾಸ್, ಕಾರ್ಯಾಗಾರ ಮುಂತಾದವುಗಳನ್ನು ಸ್ಥಗಿತಗೊಳಿಸಲು ಆದೇಶಿಸಿರುವ ಹಿನ್ನಲೆಯಲ್ಲಿ ಸಾರ್ವಜನಿಕರ ಆರೋಗ್ಯ ಹಿತ ದೃಷ್ಟಿಯಿಂದ ಆಯೋಗವು ಮೇಲ್ಕಂಡ ದಿನಾಂಕಗಳಂದು ನಡೆಸಲು ನಿಗದಿಪಡಿಸಲಾಗಿದ್ದ ಮೂಲ ದಾಖಲೆಗಳ ಪರಿಶೀಲನೆಯನ್ನು ಅನಿರ್ದಿಷ್ಟ ಅವಧಿಯವರೆಗೆ ಮುಂದೂಡಲಾಗಿರುತ್ತದೆ. ಮೂಲ ದಾಖಲೆಗಳ ಪರಿಶೀಲನೆ ನಡೆಸುವ ದಿನಾಂಕವನ್ನು ಅಭ್ಯರ್ಥಿಗಳಿಗೆ ನಂತರದಲ್ಲಿ ತಿಳಿಸಲಾಗುವುದೆಂಬುವುದನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಈ ಮೂಲಕ ಪ್ರಕಟಿಸಿದೆ.

Madhumalathi. B
(ಬಿ. ಮಧುಮಾಲತಿ)
ಉಪ ಕಾರ್ಯದರ್ಶಿ,
ಕರ್ನಾಟಕ ಲೋಕಸೇವಾ ಆಯೋಗ.

ಟಿಪ್ಪಣಿ: ಈ ಪ್ರಕಟಣೆಯನ್ನು "ನ್ಯೂಸ್ ಐಟಮ್" ಎಂದು ಪರಿಗಣಿಸಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಟಿಸಲು ಕೋರಿದೆ.